All India Radio: Bangalore
National Bulletin In Kannada
05.11.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
01.01.2026 07.35 a.m.
<><><><>

ಮುಖ್ಯಾಂಶಗಳು

1. ಕೇಂದ್ರ ಸಚಿವ ಸಂಪುಟ ಸಭೆ: ಅಗ್ನಿವೀರರ ಸೇವಾವಧಿ ವಿಸ್ತರಣೆ; ಇಂಧನ ಸಂಗ್ರಹ, ಖನಿಜ ಸಂಸ್ಕರಣಾ ಯೋಜನೆಗಳಿಗೆ ಅನುಮೋದನೆ
2. ಏಷ್ಯನ್ ಪ್ಯಾರಾ ಗೇಮ್ಸ್ ೨೦೨೬ರ ಭಾರತೀಯ ಕ್ರೀಡಾಪಟುಗಳೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಸಂವಾದ
3. ನಿಗದಿತ ಗುಣಮಟ್ಟ ಹೊಂದಿರದ ಔಷಧಿಗಳ ಪರವಾನಗಿ ರದ್ದತಿಗೆ ಆರೋಗ್ಯ ಸಚಿವಾಲಯದಿಂದ ನಿಯಮ ತಿದ್ದುಪಡಿಗೆ ಪ್ರಸ್ತಾವನೆ
4. ಅಂತಾರಾಷ್ಟ್ರೀಯ ಸಹಕಾರದೊಂದಿಗೆ ಸಾಗರ ಸಂಶೋಧನೆಯಲ್ಲಿ ಜಾಗತಿಕ ಸ್ಪರ್ಧಾತ್ಮಕತೆ ಸಾಧಿಸುವುದೇ ಭಾರತದ ಗುರಿ - ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್
5. ಕೊರಿಯಾ ಓಪನ್ ಬ್ಯಾಡ್ಮಿಂಟನ್ : ಮಹಿಳಾ ಸಿಂಗಲ್ಸ್‌ನಲ್ಲಿ ಎರಡನೇ ಸುತ್ತಿಗೆ ಲಗ್ಗೆ ಇಟ್ಟ ಅನ್ಮೋಲ್ ಖರ್ಬ್, ತನ್ವಿ ಶರ್ಮಾ

<><><><>

ನಾಲ್ಕು ವರ್ಷಗಳ ಸೇವೆಯ ಬಳಿಕ ನಿರ್ಗಮಿಸಬೇಕಿದ್ದ ಅಗ್ನಿವೀರರ ಸೇವಾ ಅವಧಿಯನ್ನು ಎರಡು ವರ್ಷಗಳ ಕಾಲ ವಿಸ್ತರಿಸಲು ಕೇಂದ್ರ ಸಚಿವ ಸಂಪುಟ ಮಹತ್ವದ ಒಪ್ಪಿಗೆ ನೀಡಿದೆ. ನವದೆಹಲಿಯಲ್ಲಿ ನಡೆದ ಸಂಪುಟ ಸಭೆಯ ಬಳಿಕ ಮಾಧ್ಯಮಗಳಿಗೆ ಮಾಹಿತಿ ನೀಡಿದ ಸೇನಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಎನ್.ಎಸ್.ರಾಜಾ ಸುಬ್ರಮಣಿ, ಹಿಂದೆ ನಿಗದಿಯಂತೆ ನಿರ್ಗಮಿಸಬೇಕಿದ್ದ ೭೫ ಪ್ರತಿಶತ ಅಗ್ನಿವೀರರಿಗೆ ಹೆಚ್ಚುವರಿಯಾಗಿ ಎರಡು ವರ್ಷಗಳ ಸೇವಾವಧಿ ನೀಡಲಾಗುವುದು ಎಂದರು. ಈ ಅವಧಿ ಪೂರ್ಣಗೊಂಡ ಬಳಿಕ ಸಶಸ್ತ್ರ ಪಡೆಗಳಲ್ಲಿ ಮುಂದುವರಿಯಲು ಇಚ್ಛಿಸುವ ಎಲ್ಲಾ ಅಗ್ನಿವೀರರನ್ನು ಖಾಯಂ ಸೇವೆಗಾಗಿ ಸೇರಿಸಿಕೊಳ್ಳಲಾಗುವುದು ಹಾಗೂ ಈ ವಿಸ್ತೃತ ಅವಧಿಯಲ್ಲಿ ಹೆಚ್ಚಿನ ಸಂಭಾವನೆ ನೀಡಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು. ಇದರ ಜೊತೆಗೆ, ಭಾರತದ ಸ್ವಚ್ಛ ಇಂಧನ ಕಾರ್ಯಕ್ರಮವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ೯೨ ಗಿಗಾವಾಟ್-ಅವರ್ ಸಾಮರ್ಥ್ಯದ ಬೃಹತ್ ಇಂಧನ ಸಂಗ್ರಹ ಯೋಜನೆಗೆ ಕೇಂದ್ರ ಸಂಪುಟ ಅನುಮೋದನೆ ನೀಡಿದೆ. ಇನ್ನು ಅಂಕಿಅಂಶಗಳ ಪರಿವರ್ತನೆ, ವಿಶ್ಲೇಷಣೆ ಮತ್ತು ಸಂಶೋಧನೆಗಾಗಿ ೨೦೨೬-೨೭ರಿಂದ ೨೦೩೦-೩೧ರವರೆಗೆ ೪ ಸಾವಿರದ ೩೭೧ ಕೋಟಿ ರೂಪಾಯಿಗಳಿಗೂ ಅಧಿಕ ವೆಚ್ಚದಲ್ಲಿ ವಿಸ್ತಾರ್ ಯೋಜನೆಯನ್ನು ಅನುಷ್ಠಾನಗೊಳಿಸಲು ಹಸಿರು ನಿಶಾನೆ ತೋರಲಾಗಿದೆ. ಭಾರತದಲ್ಲಿ ಪ್ರಮುಖ ಖನಿಜಗಳ ಸಂಸ್ಕರಣೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಐದು ವರ್ಷಗಳ

ಅವಧಿಗೆ ೨ ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ವೆಚ್ಚದೊಂದಿಗೆ 'ಕ್ಯಾಪಿಟಲ್ ಸಪೋರ್ಟ್ ಸ್ಕೀಮ್' ಯೋಜನೆಗೆ ಸಂಪುಟ ಒಪ್ಪಿಗೆ ನೀಡಿದೆ. ಇದಲ್ಲದೆ, ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗಾಗಿ ವಿಶೇಷ ಪೋಕ್ಸೋ ನ್ಯಾಯಾಲಯಗಳನ್ನು ಒಳಗೊಂಡಿರುವ ತ್ವರಿತ ವಿಶೇಷ ನ್ಯಾಯಾಲಯಗಳ ಕೇಂದ್ರ ಪುರಸ್ಕೃತ ಯೋಜನೆಯನ್ನು ೨೦೨೬ರ ಏಪ್ರಿಲ್ ೧ರಿಂದ ೨೦೩೧ರ ಮಾರ್ಚ್ ೩೧ರವರೆಗೆ ಮುಂದಿನ ಐದು ವರ್ಷಗಳ ಕಾಲ ಮುಂದುವರಿಸಲು ಸಂಪುಟ ಅನುಮೋದನೆ ನೀಡಿದೆ.

<><><><>

ಜಪಾನ್ ನಲ್ಲಿ ನಡೆದ ಏಷ್ಯನ್ ಪ್ಯಾರಾ ಗೇಮ್ಸ್ ೨೦೨೬ರಲ್ಲಿ ಸಾರ್ವಕಾಲಿಕ ಶ್ರೇಷ್ಠ ಸಾಧನೆ ತೋರಿದ ಭಾರತೀಯ ಕ್ರೀಡಾಪಟುಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯ ಇಂದಿರಾಗಾಂಧಿ ಕ್ರೀಡಾ ಸಂಕೀರ್ಣದಲ್ಲಿ ಸಂವಾದ ನಡೆಸಲಿದ್ದಾರೆ. ಈ ವಿಶೇಷ ಸಮಾರಂಭದಲ್ಲಿ ಪ್ರಧಾನಿಯವರು ಕ್ರೀಡಾಪಟುಗಳನ್ನು ಅಭಿನಂದಿಸಿ, ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಜಪಾನ್‌ನ ಐಚಿ-ನಗೋಯಾದಲ್ಲಿ ನಡೆದ ಏಷ್ಯನ್ ಪ್ಯಾರಾ ಕ್ರೀಡಾಕೂಟದಲ್ಲಿ ಭಾರತವು ತನ್ನ ಇತಿಹಾಸದಲ್ಲೇ ಅತ್ಯುತ್ತಮ ಪ್ರದರ್ಶನ ನೀಡಿದೆ. ಒಟ್ಟು ೯೭ ಪ್ಯಾರಾ ಕ್ರೀಡಾಪಟುಗಳು ಭಾಗವಹಿಸಿ, ೧೧೪ ಪದಕಗಳನ್ನು ಗೆಲ್ಲುವ ಮೂಲಕ ದೇಶದ ಕೀರ್ತಿಯನ್ನು ವಿಶ್ವಮಟ್ಟದಲ್ಲಿ ಹೆಚ್ಚಿಸಿದ್ದಾರೆ. ಈ ಪದಕ ಪಟ್ಟಿಯಲ್ಲಿ ೩೦ ಚಿನ್ನ, ೩೫ ಬೆಳ್ಳಿ ಹಾಗೂ ೪೯ ಕಂಚಿನ ಪದಕಗಳು ಸೇರಿವೆ.

<><><><>

ರೋಗಿಗಳ ಸುರಕ್ಷತೆ ಮತ್ತು ಸಾರ್ವಜನಿಕ ಆರೋಗ್ಯವನ್ನು ಖಚಿತಪಡಿಸುವ ನಿಟ್ಟಿನಲ್ಲಿ, ನಿಗದಿತ ನಿರ್ಣಾಯಕ ಗುಣಮಟ್ಟದ ಮಾನದಂಡಗಳನ್ನು ಪೂರೈಸದ ಔಷಧಿಗಳ ಉತ್ಪಾದನಾ ಪರವಾನಗಿಗಳನ್ನು ತಕ್ಷಣವೇ ಅಮಾನತುಗೊಳಿಸಲು ಅನುವು ಮಾಡಿಕೊಡುವ ಸಲುವಾಗಿ ೧೯೪೫ರ ಔಷಧ ನಿಯಮಗಳಿಗೆ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಪ್ರಮುಖ ತಿದ್ದುಪಡಿಗಳನ್ನು ಪ್ರಸ್ತಾಪಿಸಿದೆ. ಗುಣಮಟ್ಟವಿಲ್ಲದ ಔಷಧಿಗಳು ಪತ್ತೆಯಾದ ತಕ್ಷಣವೇ ತ್ವರಿತ ನಿಯಂತ್ರಕ ಕ್ರಮ ಕೈಗೊಳ್ಳಲು, ಅಂತಹ ಕಳಪೆ ಔಷಧಿಗಳ ಮುಂದುವರಿದ ಉತ್ಪಾದನೆ ಹಾಗೂ ಹಂಚಿಕೆಯನ್ನು ತಡೆಯಲು ಮತ್ತು ಈ ಮೂಲಕ ಕಟ್ಟುನಿಟ್ಟಿನ ನಿಯಮ ಪಾಲನೆಯನ್ನು ಖಚಿತಪಡಿಸಿಕೊಳ್ಳಲು ಈ ಪ್ರಸ್ತಾವಿತ ತಿದ್ದುಪಡಿಗಳು ಸಹಕಾರಿಯಾಗಲಿವೆ ಎಂದು ಸಚಿವಾಲಯ ತಿಳಿಸಿದೆ.

<><><><>

೧೮೫೭ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ವೀರ ಯೋಧರ ಸ್ಮರಣಾರ್ಥ ಅಂಬಾಲಾ ಕಂಟೋನ್ಮೆಂಟ್‌ನಲ್ಲಿ ನಿರ್ಮಿಸಲಾಗಿರುವ ಹುತಾತ್ಮರ ಸ್ಮಾರಕವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಲೋಕಾರ್ಪಣೆಗೊಳಿಸಲಿದ್ದಾರೆ. ಅಂಬಾಲಾದಲ್ಲಿ ನಿನ್ನೆ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ನಾಯಕ ಹಾಗೂ ಮಾಜಿ ಸಚಿವ ಅಸೀಮ್ ಗೋಯಲ್ ಈ ಮಾಹಿತಿ ಹಂಚಿಕೊಂಡಿದ್ದಾರೆ. ಇದು ಕೇವಲ ಸ್ಮಾರಕದ ಉದ್ಘಾಟನೆಯಲ್ಲ, ಬದಲಾಗಿ ದೇಶದ ಸ್ವಾತಂತ್ರ್ಯಕ್ಕಾಗಿ ತ್ಯಾಗ ಮಾಡಿದ ಹೆಸರಾಂತ ಹಾಗೂ ಅಜ್ಞಾತ ವೀರ ನಾಯಕರಿಗೆ ಕೃತಜ್ಞತೆ ಸಲ್ಲಿಸುವ ಐತಿಹಾಸಿಕ ಸಂದರ್ಭವಾಗಿದೆ ಎಂದು ಅವರು ಬಣ್ಣಿಸಿದರು. ಸುಮಾರು ೨೨ ಎಕರೆ ವಿಶಾಲ ಪ್ರದೇಶದಲ್ಲಿ ಸುಮಾರು ೮೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಸ್ಮಾರಕವನ್ನು ನಿರ್ಮಿಸಲಾಗಿದ್ದು, ಇದು ಹರಿಯಾಣದ

ಐತಿಹಾಸಿಕ ಪರಂಪರೆಯ ಪ್ರಮುಖ ಹೆಗ್ಗುರುತಾಗಿ ಹೊರಹೊಮ್ಮಲಿದೆ. ೧೮೫೭ರ ಸ್ವಾತಂತ್ರ್ಯ ಹೋರಾಟಕ್ಕೆ ಸಂಬಂಧಿಸಿದ ೭೦೦ಕ್ಕೂ ಅಧಿಕ ಧೀರ ಹುತಾತ್ಮರ ಹೆಸರುಗಳನ್ನು ಈ ಸ್ಮಾರಕದಲ್ಲಿ ಸುವರ್ಣಾಕ್ಷರಗಳಲ್ಲಿ ಕೆತ್ತಲಾಗಿದೆ. ಹುತಾತ್ಮರ ಸ್ಮಾರಕದ ಉದ್ಘಾಟನೆಯ ನಂತರ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅಂಬಾಲಾದ ಗಾಂಧಿ ಮೈದಾನದಲ್ಲಿ ನಡೆಯಲಿರುವ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><><><>

ದೇಶೀಯ ಸಾಮರ್ಥ್ಯಗಳು, ಅಂತರರಾಷ್ಟ್ರೀಯ ಸಹಕಾರ ಮತ್ತು ಜಾಗತಿಕ ಸಹ-ಸೃಷ್ಟಿಯ ಮೂಲಕ ಸಾಗರ ಸಂಶೋಧನೆ ಹಾಗೂ ಪರಿಶೋಧನೆಯಲ್ಲಿ ಜಾಗತಿಕ ಸ್ಪರ್ಧಾತ್ಮಕತೆಯನ್ನು ಸಾಧಿಸುವುದು ಭಾರತದ ಗುರಿಯಾಗಿದೆ ಎಂದು ಕೇಂದ್ರ ಭೂ ವಿಜ್ಞಾನ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ರಾಷ್ಟ್ರೀಯ ಕಡಲ ಪ್ರತಿಷ್ಠಾನ ಆಯೋಜಿಸಿದ್ದ 'ಇಂಡೋ-ಪೆಸಿಫಿಕ್ ಪ್ರಾದೇಶಿಕ ಸಂವಾದ ೨೦೨೬'ರಲ್ಲಿ ಮಾತನಾಡಿದ ಅವರು, ಇತ್ತೀಚಿನ ವರ್ಷಗಳಲ್ಲಿ ಭಾರತದ ವೈಜ್ಞಾನಿಕ ಕಾರ್ಯಾಚರಣೆಗಳು ಕೇವಲ ಪ್ರತ್ಯೇಕ ಸಚಿವಾಲಯಗಳಿಗೆ ಸೀಮಿತಗೊಳ್ಳದೆ, ಬಹು ಇಲಾಖೆಗಳು ಹಾಗೂ ಸಂಸ್ಥೆಗಳನ್ನು ಒಟ್ಟುಗೂಡಿಸುವ ಯೋಜನಾ ಬದ್ಧ ಚೌಕಟ್ಟನ್ನು ಆಧರಿಸಿವೆ ಎಂದು ಹೇಳಿದ್ದಾರೆ.

<><><><>

ಉತ್ತರ ಪ್ರದೇಶ ಪ್ರೌಢ ಶಿಕ್ಷಣ ಮಂಡಳಿಯು ೨೦೨೭ರ ಪ್ರೌಢಶಾಲೆ ಮತ್ತು ಪದವಿಪೂರ್ವ ಪರೀಕ್ಷೆಗಳ ಉತ್ತರ ಪತ್ರಿಕೆಗಳ ವಿನ್ಯಾಸದಲ್ಲಿ ಹೊಸ ಮಾದರಿಯನ್ನು ಪರಿಚಯಿಸಲು ನಿರ್ಧರಿಸಿದೆ. ಪರೀಕ್ಷಾ ವ್ಯವಸ್ಥೆಯನ್ನು ಮತ್ತಷ್ಟು ಸುರಕ್ಷಿತ, ಪಾರದರ್ಶಕ ಹಾಗೂ ಅಕ್ರಮಗಳಿಂದ ಮುಕ್ತಗೊಳಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಹೊಸ ವ್ಯವಸ್ಥೆಯ ಪ್ರಕಾರ, ಉತ್ತರ ಪತ್ರಿಕೆಗಳಿಗೆ ಕ್ಯೂಆರ್ ಕೋಡ್ ಹೊಂದಿರುವ ಒಂದೇ ಮುಖ್ಯ ಮುಖಪುಟ ಇರಲಿದೆ. ಈ ಕೋಡ್ ಅನ್ನು ಸ್ಕ್ಯಾನ್ ಮಾಡಿದಾಗ ಉತ್ತರ ಪ್ರದೇಶ ಪ್ರೌಢ ಶಿಕ್ಷಣ ಮಂಡಳಿಯ ಲಾಂಛನ ಕಾಣಿಸಿಕೊಳ್ಳಲಿದೆ. ಅಲ್ಲದೆ, ೧೦ನೇ ಮತ್ತು ೧೨ನೇ ತರಗತಿಗಳ ಉತ್ತರ ಪತ್ರಿಕೆಗಳಿಗೆ ಪ್ರತ್ಯೇಕ ಬಣ್ಣಗಳನ್ನು ಬಳಸಲು ಮಂಡಳಿ ನಿರ್ಧರಿಸಿದೆ.

<><><><>

ಅಂತಾರಾಷ್ಟ್ರೀಯ ಸೌರ ಒಕ್ಕೂಟ-ಐಎಸ್ಎ ಗೆ ಬಹಮಾಸ್ ರಾಷ್ಟ್ರ ೧೧೬ನೇ ಸದಸ್ಯ ರಾಷ್ಟ್ರವಾಗಿ ಅಧಿಕೃತವಾಗಿ ಸೇರ್ಪಡೆಗೊಂಡಿದೆ. ನವದೆಹಲಿಯಲ್ಲಿ ನಡೆದ ಅಂತಾರಾಷ್ಟ್ರೀಯ ಸೌರ ಒಕ್ಕೂಟದ ೯ನೇ ಮಹಾ ಸಭೆಯ ಅಧಿವೇಶನದ ಹಿನ್ನೆಲೆಯಲ್ಲಿ ಬಹಮಾಸ್‌ನ ಹೈಕಮೀಷನರ್ ಪೀಟರ್ ನಿಕೋಲಸ್ ಸೈಮೊನೆಟ್ ಜೂನಿಯರ್ ಐಎಸ್ಎ ಚೌಕಟ್ಟು ಒಪ್ಪಂದದ ಸೇರ್ಪಡೆ ಪತ್ರವನ್ನು ಭಾರತದ ವಿದೇಶಾಂಗ ಸಚಿವಾಲಯದ ಆರ್ಥಿಕ ರಾಜತಾಂತ್ರಿಕತೆ ವಿಭಾಗದ ಜಂಟಿ ಕಾರ್ಯದರ್ಶಿ ಪಿ.ಎಸ್.ಗಂಗಾಧರ್ ಅವರಿಗೆ ಹಸ್ತಾಂತರಿಸಿದರು.

<><><><>

ಇರಾನ್ ಜೊತೆಗಿನ ಯುದ್ಧದಿಂದ ಉಂಟಾದ ತೈಲ ಬೆಲೆ ಏರಿಕೆಯು ಮಧ್ಯಂತರ ಚುನಾವಣೆಯ ಫಲಿತಾಂಶದ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಕಳೆದ ಎಂಟು ತಿಂಗಳಿನಿಂದ ನಡೆಯುತ್ತಿರುವ ಈ ಸಂಘರ್ಷದ ಅಡ್ಡ ಪರಿಣಾಮವಾಗಿ ಅನಿಲ ಬೆಲೆ ಗಗನಕ್ಕೇರಿರುವುದು

ಮತದಾರರ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಆದರೂ, ಈ ಯುದ್ಧವನ್ನು ಮಾಡುವುದು ಅನಿವಾರ್ಯವಾಗಿತ್ತು ಎಂದು ಅಧ್ಯಕ್ಷ ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಇರಾನ್ ವಿಚಾರದಲ್ಲಿ ಯುದ್ಧ ಮಾಡಲೇಬೇಕಾದ ಅನಿವಾರ್ಯತೆಯಿತ್ತು, ಮತ್ತು ಅದನ್ನು ಮುಂದುವರಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ಇದಕ್ಕೂ ಮುನ್ನ, ಡೆಮೋಕ್ರಾಟ್‌ಗಳೊಂದಿಗೆ ಕೆಲಸ ಮಾಡಲು ಸಿದ್ಧವಿರುವುದಾಗಿ ತಿಳಿಸಿದ್ದ ಅವರು, ಡೆಮೋಕ್ರಾಟ್‌ಗಳ ಯಾವುದೇ ತಂತ್ರವನ್ನು ಮಟ್ಟಹಾಕಲು ತನ್ನ ಅಧ್ಯಕ್ಷೀಯ ವಿಶೇಷಾಧಿಕಾರದ ಅಸ್ತ್ರ ಬಳಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

<><><><>

೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ-ಇಫಿ ೨೦೨೬ರ ಸಿದ್ಧತೆಗಳ ಕುರಿತು ನಿನ್ನೆ ಗೋವಾ ಮುಖ್ಯಮಂತ್ರಿ ಡಾ. ಪ್ರಮೋದ್ ಸಾವಂತ್ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಪಣಜಿಯಲ್ಲಿ ಎಂಟರ್‌ಟೈನ್‌ಮೆಂಟ್ ಸೊಸೈಟಿ ಆಫ್ ಗೋವಾ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಉತ್ಸವದ ಸಿದ್ಧತೆಗಳ ಪ್ರಗತಿಯನ್ನು ಪರಿಶೀಲಿಸಿದರು. ಗೋವಾ ಫಿಲ್ಮ್ ಫೈನಾನ್ಸ್ ಯೋಜನೆಯಡಿ ಮಂಜೂರಾಗಿರುವ ಅನುದಾನವನ್ನು ಮುಂದಿನ ಎಂಟರಿಂದ ಹತ್ತು ದಿನಗಳೊಳಗೆ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಗೋವಾದ ಚಲನಚಿತ್ರ ನಿರ್ದೇಶಕ ಆದಿತ್ಯ ಸುಹಾಸ್ ಜಾಂಭಳೆ ಅವರನ್ನು ಚಲನಚಿತ್ರೋತ್ಸವದ ಸಂದರ್ಭದಲ್ಲಿ ಸನ್ಮಾನಿಸಲಾಗುವುದು ಎಂದು ಮುಖ್ಯಮಂತ್ರಿ ಮಾಹಿತಿ ನೀಡಿದ್ದಾರೆ.

<><><><>

ಕೊರಿಯಾ ಓಪನ್ ಸೂಪರ್ ೫೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಯುವ ಆಟಗಾರ್ತಿಯರಾದ ಅನ್ಮೋಲ್ ಖರ್ಬ್ ಮತ್ತು ತನ್ವಿ ಶರ್ಮಾ ಮಹಿಳಾ ಸಿಂಗಲ್ಸ್ ವಿಭಾಗದ ಎರಡನೇ ಸುತ್ತಿಗೆ ಪ್ರವೇಶಿಸಿದ್ದಾರೆ. ಆರಂಭಿಕ ಸುತ್ತಿನಲ್ಲಿ ಕೆನಡಾದ ರಾಚೆಲ್ ಚಾನ್ ಅವರನ್ನು ಎದುರಿಸಿದ ಅನ್ಮೋಲ್, ೨೧-೧೯, ೨೧-೧೮ ನೇರ ಸೆಟ್‌ಗಳಿಂದ ಜಯ ಸಾಧಿಸಿದರು. ಅವರು ಜಪಾನ್‌ನ ಎರಡನೇ ಶ್ರೇಯಾಂಕದ ಆಟಗಾರ್ತಿ ಅಕಾನೆ ಯಮಗುಚಿ ಅವರನ್ನು ಎದುರಿಸಲಿದ್ದಾರೆ. ಮತ್ತೊಂದು ಪಂದ್ಯದಲ್ಲಿ ತನ್ವಿ ಶರ್ಮಾ, ಜಪಾನ್‌ನ ಮನಮಿ ಸುಯಿಜು ಅವರನ್ನು ೨೧-೧೬, ೧೨-೨೧, ೨೧-೧೭ ಸೆಟ್‌ಗಳ ಅಂತರದಿಂದ ಮಣಿಸಿ ಮುಂದಿನ ಹಂತಕ್ಕೆ ಮುನ್ನಡೆದಿದ್ದಾರೆ. ಇಂದಿನ ೧೬ರ ಸುತ್ತಿನ ಪಂದ್ಯದಲ್ಲಿ ಅವರು, ಜಪಾನ್‌ನ ಹಿನಾ ಅಕೆಚಿ ಅವರ ವಿರುದ್ಧ ಸೆಣಸಾಡಲಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಅನುಭವಿ ಆಟಗಾರ ಎಚ್.ಎಸ್. ಪ್ರಣಯ್ ಅವರು ದಕ್ಷಿಣ ಕೊರಿಯಾದ ಯೂ ತೇ-ಬಿನ್ ವಿರುದ್ಧ ೧೫-೨೧, ೨೧-೨೩ ಅಂತರದಿಂದ ಸೋತು ಟೂರ್ನಿಯಿಂದ ಹೊರಬಂದಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>